# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 06(ಥಣಿಸಂದ್ರ)

## ವಾರ್ಡ್‌ಸಮಿತಿ ಸಭೆ, ದಿನಾಂಕ: 18-06-2022ರ

## ಸಭಾ ನಡುವಳಿ

ದಿನಾಂಕ: 18-06-2022ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.06 ಥಣಿಸಂದ್ರ ವಾರ್ಡ್ ಸಮಿತಿಯನೋಡಲ್ ಅಧಿಕಾರಿಗಳಾದ ಶ್ರೀ ಬಿ. ಎಸ್. ಶ್ರೀಧರ್ ಸ.ಕಾ.ಅ ಬ್ಯಾಟರಾಯನಪುರ ಉಪ ವಿಭಾಗ ಬಿ.ಬಿ.ಎಂ.ಪಿ ರವರ ಅಧ್ಯಕ್ಷತೆಯಲ್ಲಿ ಹೆಗಡೆನಗರ 2ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಬಿ.ಬಿ.ಎಂ.ಪಿ ಸಮುದಾಯ ಭವನದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ. ಎಸ್. ಶ್ರೀಧರ್ | ನೋಡಲ್ ಅಧಿಕಾರಿಗಳು ವಾರ್ಡ್ ನಂ 06(ಥಣಿಸಂದ್ರ) ಹಾಗೂ ಸ.ಕಾ.ಅ (ಬ್ಯಾ.ಉ.ವಿ), ಬಿ.ಬಿ.ಎಂ.ಪಿ |
| 2 | ಶ್ರೀ ಸುರೇಶ ದೇವತರಾಜ್ | ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ, ವಾರ್ಡ್ ಸಮಿತಿ, ವಾರ್ಡ್ ನಂ 06(ಥಣಿಸಂದ್ರ) |
| 3 | ಡಾ॥ ಪೃತ್ವಿ ಹೆಚ್.ಆರ್ | ವೈದ್ಯಾಧಿಕಾರಿಗಳು, ಪ್ರಾ.ಆ.ಕೇಂ, ಥಣಿಸಂದ್ರ |
| 4 | ಶ್ರೀ ಕಿರಣ್ ಬಿ | ಸ.ಕಾ.ಅ , ಯೋಜನಾ ವಿಭಾಗ, ಯಲಹಂಕ ಬಿಬಿಎಂಪಿ |
| 5 | ಕು. ನಂದನ ಸಿ.ಎನ್ | ಸ..ಅ, ಬಿ.ಡಬ್ಲ್ಯೂ.ಎಸ್.ಎಸ್.ಬಿ (ನಿರ್ವಹಣೆ) |
| 6 | ಶ್ರೀ ಮುನಿರಾಜು | ಎ.ಎಸ್.ಐ ಬಾಣಸವಾಡಿ ಟ್ರಾಫಿಲ್ ಪೋಲೀಸ್ ಠಾಣೆ |
| 7 | ಶ್ರೀ ಕಾಂತಮಣಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 06 (ಥಣಿಸಂದ್ರ) |
| 8 | ಶ್ರೀ ಸುನೀಲ್ ಬಿ. | ಮಾರಶಲ್ ವಾರ್ಡ್ ನಂ 06 |

ಶ್ರೀ ಸುರೇಶ ದೇವತರಾಜ್ ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಮಿತಿಯ ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಸಮಿತಿಯ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡಾ ವಿಷಯದ ಬಗ್ಗೆ ತಿಳಿಸಿದರು.

1. **ಹಿಂದಿನ ಸಭೆಯಲ್ಲಿ ಚರ್ಚಿಸಿಲಾಗಿರುವ ವಿಷಯಗಳ ಬಗ್ಗೆ:** ಪ್ರಥಮವಾಗಿ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿರುವ ವಿಷಯಗಳ ಬಗ್ಗೆ ವಿವರವನ್ನು ಸದಸ್ಯ ಕಾರ್ಯದರ್ಶಿಗಳು ಸಭೆಯ ಗಮನಕ್ಕೆ ತರುತ್ತಾ, ಹಿಂದಿನ ಸಭೆಯಲ್ಲಿ ಚರ್ಚಿಸಿದ ವಿಷಯದ ಬಗ್ಗೆ ತೆಗೆದುಕೊಂಡು ಕ್ರಮದ ಬಗ್ಗೆ ಸಭೆಗೆ ತಿಳಿಸಿದರು.
2. **ಕೋವಿಡ್-19ರ ಸೋಂಕಿನ ಮುಂಜಾಗೃತ ಕ್ರಮದ ಬಗ್ಗೆ:** ಶ್ರೀ ಪೃತ್ವಿ ಹೆಚ್.ಆರ್ ರವರು ಮಾತನಾಡಿ ಕರೋನಾ ಸೋಂಕು ದಿನೇ ದಿನೇ ರಾಜ್ಯದಲ್ಲಿ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮದ ಬಗ್ಗೆ ತಾತ್ಸರ ಮಾಡದಂತೆ ಮಾಸ್ಕ್, ಸ್ಯಾನಿಟೇಸರ್‌ಗಳ ಉಪಯೋಗದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕಾಗಿರುತ್ತದೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಸಾರ್ವಜನಿಕರು ಹೆಚ್ಚುವರಿ ಡೋಸ್‌ನ ಲಸಿಕೆ ಪಡೆಯುವಂತೆ ಅರಿವು ಮೂಡಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.
3. **ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ :**

- **ಶ್ರೀ ಯಾಸ್ಮಿನ್ ಭಾನು ವಿದ್ಯಾಸಾಗರ ರವರು ಮಾತನಾಡಿ:** ವಿದ್ಯಾಸಾಗರ ಗ್ರಾಮದಲ್ಲಿ ಘನತ್ಯಜ್ಯ ವಿಲೇವಾರಿ ಸಮರ್ಪಕವಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲವೆಂದು ಸಭೆಗೆ ತಿಳಿಸಿದರು. ಹಾಗೂ ಚರಂಢಿಗಳಲ್ಲಿ ಹೂಳು ತುಂಬಿರುವುದರಿಂದ ಮಳೆ ನೀರು ಸರಾಗವಾಗ ಹರಿಯದೇ ನೀರು ರಸ್ತೆಯಲ್ಲಿ ಹರಿಯುತ್ತಿರುವುದಾಗಿ ತಿಳಿಸಿದರು.

- **ಸುಲ್ತಾನ್ ರವರು ಮಾತನಾಡಿ** ಸರಾಯಿಪಾಳ್ಯ ಮತ್ತು ಟೂಬಾ ಬಡಾವಣೆಯಲ್ಲಿ ಘನತ್ಯಜ್ಯ ನಿರ್ವಹಣೆಯ ಗಾಡಿಗಳು ಬರುತ್ತಿರುವುದಿಲ್ಲವೆಂದು ಸಭೆಗೆ ತಿಳಿಸಿದರು.
- **ಸಮೀನಾ ಬಾನು ರವರು ಮಾತನಾಡಿ:** ವಿದ್ಯಾಸಾಗರ ರಸೂಲ್ ಬಡಾವಣೆಯಲ್ಲಿ ಕಸ ನಿರ್ವಹಣೆ ಯಾಗುತ್ತಿರುವುದಿಲ್ಲವೆಂದು ಸಭೆಗೆ ತಿಳಿಸಿದರು.

4. **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಮತ್ತು ಒಳಚರಂಡಿಗೆ ಸಂಬಂದಿಸಿದ ವಿಷಯಗಳ ಬಗ್ಗೆ :**

- **ಶ್ರೀ ನಾಗೇಶ್ ಥಣಿಸಂದ್ರ ರವರು ಮಾತನಾಡಿ** ಥಣಿಸಂದ್ರ ಮುಖ್ಯರಸ್ತೆಯಲ್ಲಿ ಒಳಚರಂಡಿಯ ಮುಖ್ಯ ಚರಂಡಿಯ ಮುಚ್ಚಳ ಒಡೆದಿದ್ದು, ಸರಿಪಡಿಸುವಂತೆ ಕೋರಿದರು. ಹಾಗೂ ಥಣಿಸಂದ್ರ ಮುಖ್ಯ ಮತ್ತು ಅಡ್ಡರಸ್ತೆಗಳ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ವಿಲೇವಾರಿ ಮಾಡುವಂತೆ ಕೋರಿದರು.
- **ಜೂರಾಮ್, ಶಿರಡಿ ಸಾಯಿನಗರ ಕ್ಷೇಮಾಭಿವೃದ್ಧಿ ಸಂಘ** ರವರು ಮಾತನಾಡಿ ಶಿರಡಿ ಸಾಯಿನಗರದಲ್ಲಿ ಒಳಚರಂಡಿ ಕಾಮಗಾರಿ ಕೈಗೊಂಡಿರುವುದಿಲ್ಲ ಎಂದು ತಿಳಿಸಿದರು.
- **ಲಕ್ಷ್ಮಮ್ಮ ಹೆಗಡೆನಗರ ರವರು ಮಾತನಾಡಿ:** ಹೆಗಡೆನಗರದಲ್ಲಿ ಅನಧಿಕೃತವಾಗಿ ಯು.ಜಿ.ಡಿ ಸಂಪರ್ಕವನ್ನು ಪತ್ತೆ ಹಚ್ಚಿ ಕಡಿತಗೊಳಿಸುವಂತೆ ಸಭೆಯಲ್ಲಿ ಕೋರಿದರು.

5. **<u>ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.</u>**

- **ಶ್ರೀ ಜಗನಾಥನ್ ರವರು ಮಾತನಾಡಿ** ಥಣಿಸಂದ್ರ ಮುಖ್ಯರಸ್ತೆಯಲ್ಲಿ ಕೆಲವು ಅಪರಿಚಿತರು ಸ್ಕೂಟರ್‌ಗಳಲ್ಲಿ ವೀಲಿಂಗ್ ಮಾಡುತ್ತಿರುವುದರಿಂದ ವಾಹನ ಸವಾರರಿಗೆ ತೊಂದರೆಯಾಗಿರುತ್ತದೆ ಇದರಿಂದ ಸಂಬಂದಪಟ್ಟ ಪೋಲಿಸ್ ಠಾಣೆ ಅಧಿಕಾರಿಯವರಿಗೆ ಸೂಚನೆ ನೀಡಿ ಈ ಬಗ್ಗೆ ಕ್ರಮ ವಹಿಸುವಂತೆ ಕೋರಿದರು.
- **ಯಶ್ವಂತಕುಮಾರ್ ರವರು** ಮಾತನಾಡಿ ಹೆಗಡೆನಗರ ನಾರಾಯಣಪುರ ಕ್ರಾಸ್ ನಂದಗೋಕುಲ ಕಲ್ಯಾಣ ಮಂಟಪದ ಹತ್ತಿರ ಅಧಿಕವಾಗಿ ಸುರಿದ ಮಳೆಯಿಂದಾಗಿ ರಸ್ತೆ ಮೇಲೆ ನೀರು ಹರಿದು ವಾಹನ ಸಂಚಾರಕ್ಕೆ ತುಂಬ ಅಡಚಣೆ ಉಂಟಾಗಿರುತ್ತದೆ ಇದರಿಂದ ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುವಂಥೆ ಸಂಬಂಧಪಟ್ಟ ಅಧಿಕಾರಿಗಳೀಗೆ ಸೂಚನೆ ನೀಡುವಂತೆ ಕೋರಿದರು

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು, ವಾರ್ಡ್ ಸಮಿತಿರವರು ಮಾತನಾಡಿಈವರೆಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರೀಗಣಿಸಿ ಎಲ್ಲಾದೂರು ಮತ್ತು ಸಲಹೆ ಮತ್ತು ಸೂಚನೆಗಳನ್ನು ಕಾರ್ಯರೂಪಕ್ಕೆತರಲುಸಂಬಂಧಪಟ್ಟ ಇಲಾಖೆ ಅಧಿಕಾರಿಗಳುಅಗತ್ಯಕ್ರಮ ಕೈಗೊಳ್ಳುವಂತೆ ಸೂಚಿಸುತ್ತಾಗೂಗಲ್ ಮೀಟ್ಆಪ್ ಮುಖಾಂತರ ವರ್ಚುವಲ್ ಸಭೆಗೆ ಹಾಜರಾಗಿದ್ದಎಲ್ಲಾ ಅಧಿಕಾರಿಗಳಿಗೆ ಹಾಗೂ ವಿವಿಧ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಹಾಜರಾಗಿರುವ ಸಾರ್ವಜನಿಕರಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿ**
ಹಾಗೂ ಸಹಾಯಕಅಭಿಯಂತರರು
ವಾರ್ಡ್ ನಂ. 06, (ಥಣಿಸಂದ್ರ)

**ನೋಡಲ್ ಅಧಿಕಾರಿಗಳು**
ವಾರ್ಡ್ ಸಮಿತಿ, ವಾರ್ಡ್ ನಂ. 06(ಥಣಿಸಂದ್ರ)
ಹಾಗೂ ಸ.ಕಾ.ಅ ಬ್ಯಾಟರಾಯನಪುರ ಉಪ ವಿಭಾಗ
ಬಿಬಿಎಂಪಿ, ಬೆಂಗಳೂರು

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.